3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,ರವರ ನ್ಯಾಯಾಲಯ, ಕಡೂರು

ಓ.ಎಸ್.ನಂ.376/2016

ದಿನಾಂಕಃ02-07-2019 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಪಿ.ಡಬ್ಲ್ಯುಃ1

**ಮುಖ್ಯ ವಿಚಾರಣೆಃ ಶ್ರೀ. ಕೆ.ಪಿ.ಎನ್ ವಾದಿಪರ ವಕೀಲರಿಂದಃ-**

ನಾನು ಈ ದಾವೆಯಲ್ಲಿ ವಾದಿಯಿಂದ ಅಧಿಕಾರ ಪತ್ರವನ್ನು ಪಡೆದುಕೊಂಡಿರುತ್ತೇನೆ. ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸುತ್ತಿದ್ದೇನೆ. ಅದನ್ನು ಓದಿ, ತಿಳಿದು, ಸಹಿ ಮಾಡಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ.

ವಾದಿಯು ಬರೆದುಕೊಟ್ಟಿರುವ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, 2014-15 ನೇ ಸಾಲೀನ ಆಸ್ತಿ ತೆರಿಗೆ ಬೇಡಿಕೆ ಸಂಗ್ರಹಣೆ, ಬಾಕಿ ಹಾಗೂ ನಮೂನೆ-3 ರ ರಿಜಿಸ್ಟರ್ ನ ಪ್ರತಿಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-2 ಎಂದು, 2012-13 ನೇ ಸಾಲೀನ ಆಸ್ತಿ ತೆರಿಗೆ ಬೇಡಿಕೆ ಸಂಗ್ರಹಣೆ, ಬಾಕಿ ಹಾಗೂ ನಮೂನೆ-3 ರ ರಿಜಿಸ್ಟರ್ ನ ಎರಡು ಪ್ರತಿಯನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು ನಿಪಿ-3 ಮತ್ತು 4 ಎಂದು, ಚಕ್ಕುಬಂದಿ ದೃಢೀಕರಣ ಪತ್ರವನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದು ಮುಂದೂಡಲಾಯಿತು.**

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

ಓ.ಹೇ.ಕೇ.ಸ.ಇ.ಎ.ಒ.

(ದೀಪು ಎಂ.ಟಿ.)
3 ನೇ.ಹೆ.ಪ್ರಃದಃನ್ಯಾಃದಂ.,ರವರು, ಕಡೂರು.